(ಇಂದು ದಿನಾಂಕಃ 06-03-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**<u>ಪಾಟೀ ಸವಾಲು: ಶ್ರೀ ವಿ.ಆರ್.ಎಮ್. ವಕೀಲರಿಂದಃ</u>**

ಮೃತ ಮಹಾಂತೇಶ ನನ್ನ ಗಂಡ. ದಿನಾಂಕ 26-05-2022 ರಂದು ಅಪಘಾತವಾಗಿರುತ್ತದೆ. ಪೋಲಕಪಳ್ಳಿಯ ಭಾಗ್ಯವಂತಿ ಗುಡಿ ಹತ್ತಿರ ಅಪಘಾತವಾಗಿರುತ್ತದೆ. ನನ್ನ ಗಂಡ ದ್ವಿಚಕ್ರ ವಾಹನದಲ್ಲಿ ಹೋಗುವಾಗ ಲಾರಿಯಿಂದ ಅಪಘಾತಗಾತವಾಗಿರುತ್ತದೆ. ಪೋಲಕಪಳ್ಳಿಯಿಂದ ಚಿಂಚೋಳಿಗೆ ಬರುವಾಗ ಅಪಘಾತವಾಗಿರುತ್ತದೆ. ನನ್ನ ಮೃತ ಗಂಡನ ವಾಹನ ಚಾಲನಾ ಪರವಾನಗಿಯ ಪ್ರತಿಯನ್ನು ಈಗ ಸಲ್ಲಿಸುತ್ತೇನೆ. ಅದನ್ನು ನಿ.ಪಿ-9 ಎಂದು ಗುರುತಿಸಲಾಯಿತು. ನಾನು ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ಕೇಳಿ ತಿಳಿದುಕೊಂಡಿರುತ್ತೇನೆ. ಅದಕ್ಕೆ ಪೂರಕವಾಗಿ ದೂರನ್ನು ನೀಡಿರುತ್ತೇನೆ. ನನ್ನ ದೂರಿನಲ್ಲಿ ಮುಂದೆ ಹೋಗುತ್ತಿದ್ದ ಲಾರಿಗೆ ನನ್ನ ಮೃತ ಗಂಡ ದ್ವಿಚಕ್ರ ವಾಹನವನ್ನು ಡಿಕ್ಕಿ ಪಡಿಸಿ ಅಪಘಾತವಾಗಿರುತ್ತದೆ ಎಂದು ದೂರಿನಲ್ಲಿ ನಮೂದಿಸಿದ್ದೇನೆ ಎಂದರೆ ಸರಿ. ಪೋಲೀಸರು ಹಸ್ತ ನಕ್ಷೆಯಲ್ಲಿ ಅಪಘಾತವು ವಿರುದ್ದ ದಿಕ್ಕಿನಲ್ಲಿ ಆಗಿರುತ್ತದೆ ಎಂದು ನಮೂದು ಮಾಡಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನನ್ನ ಗಂಡ ಅಡ್ಡಾ ದಿಡ್ಡಿ ದ್ವಿಚಕ್ರ ವನ್ನು ನಡೆಸುಕೊಂಡು ಹೋಗಿ ಲಾರಿಗೆ ಹಿಂದಿನಿಂದ ಡಿಕ್ಕಿ ಪಡಿಸಿ ಅಪಘಾತ ಪಡಿಸಿಕೊಂಡಿರುತ್ತಾನೆ ಎಂದರೆ ಸರಿಯಲ್ಲ. ಅಪಘಾತವು ಲಾರಿ ಚಾಲಕನ ತಪ್ಪಿನಿಂದ ಆಗಿಲ್ಲ ಎಂದರೆ ಸರಿಯಲ್ಲ.

ಅಪಘಾತವಾದಾಗ ನನ್ನ ಗಂಡನ ವಯಸ್ಸು 28 ಆಗಿತ್ತು. ನನ್ನ ಗಂಡ ಮೇಸ್ತ್ರಿ ಕೆಲಸ ಮಾಡುತ್ತಿದ್ದ. ಅದರಿಂದ 20,000/- ಆದಾಯ ಗಳಿಸುತ್ತಿರಲಿಲ್ಲ ಎಂದರೆ ಸರಿಯಲ್ಲ. ವಾದಿ 1 ಮತ್ತು 6 ರವರು ಅವರ ಮೇಲೆ ಅವಲಂಬಿತರು ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡ ಚಲಾಯಿಸುತ್ತಿದ್ದ ದ್ವಿಚಕ್ರ ವಾಹನ ನೋಂದಣಿ ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ಅಪಘಾತವಾದಾಗ ನನ್ನ ಗಂಡ ಹೆಲ್ಮೆಟ್ ಧರಿಸಿರಲಿಲ್ಲ ಎಂದರೆ ಸರಿ. ನನ್ನ ಗಂಡ ಚಲಾಯಿಸುತ್ತಿದ್ದ ದ್ವಿ ಚಕ್ರ ವಾಹನದ ಇನ್ಸೂರೆನ್ಸ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡನ ತಪ್ಪಿ ನಿಂದ ಅಪಘಾತವಾಗಿದ್ದರೂ ಲಾರಿ ಚಾಲಕನಿಂದ

ಅಪಘಾತವಾಗಿರುತ್ತದೆ ಎಂದು ಸುಳ್ಳು ಪ್ರಕರಣವನ್ನು ದಾಖಲಿಸಿ, ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ದೂರನ್ನು ಯಾರಿಂದ ಕೇಳಿ ತಿಳಿದು ನೀಡಿರುತ್ತೇನೆ ಎಂದು ನನ್ನ ದೂರಿನಲ್ಲಿ ನಮೂದಿಸಿಲ್ಲ ಎಂದರೆ ಸರಿಯಲ್ಲ. ಅವಧಿ ಮೀರಿ ಪ್ರಕರಣವನ್ನು ದಾಖಲಿಸಿದ್ದೇವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ,
ಚಿಂಚೋಳಿ.